# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಗ್ರೂಪ್-ಡಿ ವೃಂದದ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ:- ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಏಕ ಕಡತ ಸಂಖ್ಯೆ:ಹಿಂವಕಇ/ಸಿಬ್ಬಂದಿ-4/ಸಿಆರ್-08/20151-16, ದಿ:15.7.2015.

6/11/15

**ಪ್ರಸ್ತಾವನೆ:**

ಮೇಲೆ ಓದಲಾದ ಏಕಕಡತದಲ್ಲಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು, ಆಶ್ರಮ ಶಾಲೆಗಳು ಮತ್ತು ಜಿಲ್ಲಾ ಕಚೇರಿಗಳಲ್ಲಿ ಸರ್ಕಾರದಿಂದ ಮಂಜೂರಾಗಿರುವ ಗ್ರೂಪ್-ಡಿ ಹುದ್ದೆಗಳು ವಿವರಗಳು ಹಾಗೂ ದಿ:15.7.2015 ರಲ್ಲಿದ್ದಂತೆ ಖಾಲಿ ಇರುವ ಹುದ್ದೆಗಳ ವಿವರ ಈ ಕೆಳಗಿನಂತಿದೆ:

| ಕ್ರ ಸಂ | ವೃಂದ ಮತ್ತು ವೇತನ ಶ್ರೇಣಿ | ಹುದ್ದೆಗಳ ಸಂಖ್ಯೆ | | |
|---|---|---|---|---|
| | | ಮಂಜೂರಾದ | ಕಾರ್ಯನಿರತ | ಖಾಲಿ |
| 1 | ಅಡುಗೆಯವರು (10400-16400) | 5271 | 2176 | 3095 |
| 2 | ಅಡುಗೆ ಸಹಾಯಕರು (9600-14550) | 3277 | 807 | 2470 |
| 3 | ರಾತ್ರಿ ಕಾವಲುಗಾರರು (9600-14550) | 934 | 97 | 837 |
| 4 | ಜವಾನರು (9600-14550) | 47 | 22 | 25 |
| | ಒಟ್ಟು | **9529** | **3102** | **6427** |

ಸರ್ಕಾರದ ಪತ್ರ ಸಂಖ್ಯೆ:ಸಕಇ 239 ಬಿಇಟಿ 2007, ದಿ:8.7.2008 ರಲ್ಲಿ ಮೇಲ್ಕಾಣಿಸಿದ ಗ್ರೂಪ್-ಡಿ ವೃಂದದ ಹುದ್ದೆಗಳ ಸೇವೆಯನ್ನು ಮಾನವ ಸಂಪನ್ಮೂಲ ಏಜೆನ್ಸಿಗಳಿಂದ ಹೊರಗುತ್ತಿಗೆ ಆಧಾರದ ಮೇಲೆ ಪಡೆದು ವಿದ್ಯಾರ್ಥಿನಿಲಯಗಳ ನಿರ್ವಹಣೆಯನ್ನು ಮಾಡುವಂತೆ ತಿಳಿಸಲಾಗಿರುತ್ತದೆ. ಇದರಿಂದಾಗಿ ಗ್ರೂಪ್-ಡಿ ಹುದ್ದೆಗೆ ಸಂಬಂಧಿಸಿದಂತೆ 2008 ರ ನಂತರ ಈವರೆಗೆ ಖಾಲಿ ಬಿದ್ದಂತಹ ರಿಕ್ತ ಸ್ಥಾನಗಳಿಗೆ ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಕ್ರಮವನ್ನು ಕೈಗೊಂಡಿರುವುದಿಲ್ಲ. ಬದಲಾಗಿ ಹೊರಸಂಪನ್ಮೂಲ ಏಜೆನ್ಸಿಯಿಂದಲೆ ಸದರಿ ವೃಂದದ ಸಿಬ್ಬಂದಿ ಸೇವೆಯನ್ನು ಪಡೆಯಲಾಗಿದೆ.

ಅಧಿಸೂಚನೆ ಸಂಖ್ಯೆ:ಹೆಚ್‌ಡಿ 497 ಎಸ್‌ಎಸ್‌ಟಿ 98, ದಿ:19.12.1998 ರಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಗಳಲ್ಲಿನ ನಿಲಯ ಪಾಲಕರು, ಅಡುಗೆಯವರು, ಅಡುಗೆ ಸಹಾಯಕರು ಮತ್ತು ಇನ್ನಿತರೆ ಗ್ರೂಪ್-ಡಿ ಹುದ್ದೆಗಳನ್ನು Karnataka Essential Services and Maintainence Act 1994 ರಡಿಯಲ್ಲಿ Essential Services ಎಂದು ಪರಿಗಣಿಸಿರುವುದರಿಂದ ಈ ಹುದ್ದೆಗಳನ್ನು ಖಾಯಂ ಆಧಾರದ ಮೇಲೆ ನೇರ ನೇಮಕಾತಿ ಮೂಲಕ ಭರ್ತಿ ಮಾಡುವುದು ಸೂಕ್ತವಾಗಿರುತ್ತದೆ. ವಿದ್ಯಾರ್ಥಿನಿಲಯಗಳಲ್ಲಿ ನಿಲಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಪೌಷ್ಠಿಕವಾದ ಶುದ್ಧ ಆಹಾರದ ತಯಾರಿಕೆ ಮಾಡಬೇಕಾಗುತ್ತದೆ. ಈ ಹುದ್ದೆಗಳಲ್ಲಿ ಧೀರ್ಘಾವಧಿ ಕಾರ್ಯನಿರ್ವಹಿಸುವಂತಹ ಅನುಭವಿ ಸಿಬ್ಬಂದಿಗೆ ಮಾತ್ರ ಶುಚಿ ಮತ್ತು ರುಚಿಯಾದ ಆಹಾರವನ್ನು ತಯಾರಿಸಲು ಸಾಧ್ಯವಾಗುತ್ತದೆ ಮತ್ತು ಇಲಾಖೆಯ ಖಾಯಂ ಸಿಬ್ಬಂದಿಯಾಗಿದ್ದಲ್ಲಿ ನಿಲಯಾರ್ಥಿಗಳ ಸುರಕ್ಷತೆ ಮತ್ತು ಅವರುಗಳ ಆರೋಗ್ಯದ ಕಡೆ ಗಮನ ಹರಿಸಲು ಜವಾಬ್ದಾರಿ ವಹಿಸಬಹುದಾಗಿರುತ್ತದೆ. ಇತ್ತೀಚಿನ ದಿನಗಳಲ್ಲಿ ವಿದ್ಯಾರ್ಥಿನಿಲಯಗಳಲ್ಲಿ ದೋಷಪೂರಿತ ಆಹಾರ ಸೇವನೆ, ವಿದ್ಯಾರ್ಥಿನಿಲಯಗಳಲ್ಲಿನ ಬಾಲಕಿಯರಿಗೆ ಹೊರಸಂಪನ್ಮೂಲ ಸಿಬ್ಬಂದಿಯಿಂದ ಲೈಂಗಿಕ ಕಿರಿಕುಳದಂತಹ ಪ್ರಕರಣಗಳು ಕೇಳಿ ಬರುತ್ತಿದ್ದು, ಇಲಾಖೆಯ ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ವಿದ್ಯಾರ್ಥಿನಿಯವರ ಸುರಕ್ಷತೆ ಕಾಪಾಡುವುದು ಇಲಾಖೆಯ ಜವಾಬ್ದಾರಿಯಾಗಿರುತ್ತದೆ.

....2

ಹೊರಸಂಪನ್ಮೂಲದ ಸಿಬ್ಬಂದಿಯವರು ಜವಾಬ್ದಾರಿಯಿಂದ ಕೆಲಸ ನಿರ್ವಹಿಸುವುದಿಲ್ಲ. ಅವರು ಇಲಾಖೆಯ ನಿಯಂತ್ರಣಕ್ಕೆ ಒಳಪಡುವುದಿಲ್ಲ. ಇದರಿಂದ ಅವರ ಮೇಲೆ ಯಾವುದೇ ಶಿಸ್ತು ಕ್ರಮ ತೆಗೆದುಕೊಳ್ಳಲು ಸಾಧ್ಯವಾಗುವುದಿಲ್ಲ. ಅವರು ನಿಲಯವನ್ನು ಬಿಟ್ಟುಹೋದಂತಹ ಸಂದರ್ಭದಲ್ಲಿ ವಿದ್ಯಾರ್ಥಿನಿಯರ ರಕ್ಷಣೆ ಮತ್ತು ಭದ್ರತೆಗೆ ತೊಂದರೆ ಉಂಟಾಗುತ್ತದೆ. ಇದು ನಿಲಯಾರ್ಥಿಗಳ ಶೈಕ್ಷಣಿಕ ಪ್ರಗತಿ ಮೇಲೆ ವ್ಯತಿರಿಕ್ತ ಪರಿಣಾಮ ಉಂಟು ಮಾಡುವ ಸಾಧ್ಯತೆ ಇರುತ್ತದೆ. ಒಂದು ವೇಳೆ ಖಾಯಂ ಸಿಬ್ಬಂದಿ ಇದ್ದಲ್ಲಿ ಅವರು ಇಲಾಖೆಯ ನಿಯಂತ್ರಣದಲ್ಲಿದ್ದು, ಕರ್ನಾಟಕ ನಾಗರೀಕ ಸೇವಾ ನಿಯಮಗಳಿಗೆ ಒಳಪಟ್ಟು ಶಿಸ್ತು ಮತ್ತು ಸಂಯಮದಿಂದ ಕರ್ತವ್ಯ ನಿರ್ವಹಿಸುತ್ತಾರೆ. ವಿದ್ಯಾರ್ಥಿನಿಲಯಗಳಲ್ಲಿ ಶಿಸ್ತು, ದಕ್ಷತೆ ಮತು ಸುರಕ್ಷತೆಯಿಂದ ಕರ್ತವ್ಯ ನಿರ್ವಹಿಸಲು ಹೊರ ಸಂಪನ್ಮೂಲದ ಸಿಬ್ಬಂದಿಯ ಬದಲಿಗೆ ನೇರ ನೇಮಕಾತಿ ಮೂಲಕ ಖಾಯಂ ಅಡುಗೆಯವರು, ಅಡುಗೆ ಸಹಾಯಕರು ಮತ್ತು ರಾತ್ರಿ ಕಾವಲುಗಾರರ ಸಿಬ್ಬಂದಿಯನ್ನು ವಿದ್ಯಾರ್ಥಿಗಳ ರಕ್ಷಣೆ ದೃಷ್ಟಿಯಿಂದ ನೇಮಕ ಮಾಡಿಕೊಳ್ಳುವುದು ಸೂಕ್ತವಾಗಿರುತ್ತದೆ. ಇದರ ಜೊತೆಗೆ ವಿದ್ಯಾರ್ಥಿನಿಲಯದ ಬೆಲೆ ಬಾಳುವ ಪೀಠೋಪಕರಣಗಳು, ಕಟ್ಟಡ ಇತ್ಯಾದಿಗಳ ಭದ್ರತೆ ಕೂಡ ಪ್ರಮುಖವಾದ ವಿಷಯವಾಗಿರುತ್ತದೆ.

2013-14ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-276 ರಲ್ಲಿ "ವಿದ್ಯಾರ್ಥಿನಿಲಯಗಳಲ್ಲಿ ಖಾಲಿ ಉಳಿದಿರುವ ಎಲ್ಲಾ ಸಮೂಹ ಡಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು" ಎಂದು ತಿಳಿಸಲಾಗಿದೆ.

ವಿದ್ಯಾರ್ಥಿನಿಲಯಗಳ ಸುಗಮ ನಿರ್ವಹಣೆ ಮಾಡುವ ದೃಷ್ಟಿಯಿಂದ ಹಾಗೂ ಆಡಳಿತಾತ್ಮಕ ಕಾರಣಗಳಿಗೆ ಈ ಹುದ್ದೆಗಳನ್ನು ಖಾಯಂ ಆಧಾರದ ಮೇಲೆ ನೇರ ನೇಮಕಾತಿ ಮತ್ತು ಮುಂಬಡ್ತಿ ಮೂಲಕ ತುಂಬುವುದು ಅಗತ್ಯವಿರುತ್ತದೆ. ಆದ್ದರಿಂದ ದಿ:6.9.2014 ರಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ, ಇಲಾಖೆಯ ಎಲ್ಲಾ ಗ್ರೂಪ್-ಡಿ ವೃಂದದ ಖಾಲಿ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಆರ್ಥಿಕ ಇಲಾಖೆಯ ಸಹಮತಿ ಪಡೆದು, ಅನುಮತಿ ನೀಡಬೇಕೆಂದು ಕೋರಲಾಗಿತ್ತು. ಸದರಿ ಪ್ರಸ್ತಾವನೆಗೆ ಸಕಾರದ ಪತ್ರ ಸಂಖ್ಯೆ:ಹಿಂವಕ 267 ಬಿಇಟಿ 2013, ದಿ:22.11.2014 ರಲ್ಲಿ ಗ್ರೂಪ್-ಡಿ ಹುದ್ದೆಗಳನ್ನು ತುಂಬುವ ಕುರಿತಂತೆ ಈ ಕೆಳಕಂಡಂತೆ ಕ್ರಮವಹಿಸಲು ತಿಳಿಸಲ್ಪಟ್ಟಿರುತ್ತದೆ.

> "Backward Classes Welfare Department is advised to continue with the existing system of outsourcing Junior Level Staff, (Cook, Cook Assistant, Night watchman & Group D) and to strengthen the supervision and monitoring of these staff by the Wardens who are regular department staff.

ಸರ್ಕಾರದ ಆದೇಶ ಸಂಖ್ಯೆ:ಹಿಂವಕ 323 ಬಿಎಂಎಸ್ 2014, ದಿ:7.7.2015 ರಲ್ಲಿ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ:13.07.2015ರಂದು ಇಲಾಖೆ/ನಿಗಮಗಳಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳನ್ನು ತುಂಬುವ ಬಗ್ಗೆ ನಡೆದ ಸಭೆಯಲ್ಲಿ ಚರ್ಚಿಸಿ, ಸೂಚಿಸಿದಂತೆ, 2013-14ನೇ ಸಾಲಿನ ಆಯವ್ಯಯ ಭಾಷಣದನುಸಾರ ವಿದ್ಯಾರ್ಥಿನಿಲಯಗಳಲ್ಲಿ ಖಾಲಿ ಉಳಿದಿರುವ ಎಲ್ಲಾ ಸಮೂಹದ ಗ್ರೂಪ್-ಡಿ ಹುದ್ದೆಗಳನ್ನು ಭರ್ತಿ ಮಾಡಲು ಮತ್ತೊಮ್ಮೆ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಆದೇಶಿಸಿರುತ್ತಾರೆ.

. . . . 3

ಸರ್ಕಾರದ ಅಧಿಸೂಚನೆ ಸಂಖ್ಯೆ:ಎಸ್‌ಡಬ್ಲ್ಯೂಡಿ 239 ಬಿಇಟಿ 2007, ದಿ:18.10.2007 ರಲ್ಲಿನ ತಿದ್ದುಪಡಿ ವೃಂದ ಮತ್ತು ನೇಮಕಾತಿ ನಿಯಮಗಳ ಪ್ರಕಾರ-"Karnataka Backward Classes and Minorities Department Services(Cadre & Recruitment)(Amendement) Rules 2007ರ ಪ್ರಕಾರ ಖಾಲಿ ಇರುವ ಕೆಳಕಂಡ ವೃಂದದ ಗ್ರೂಪ್-ಡಿ ಹುದ್ದೆಗಳನ್ನು ನೇರ ನೇಮಕಾತಿ ಮತ್ತು ಮುಂಬಡ್ತಿ ಹುದ್ದೆಗಳನ್ನು ಈ ಕೆಳಗಿನಂತೆ ವರ್ಗೀಕರಿಸಿದೆ.

| ಕ್ರ.ಸಂ. | ವೃಂದ ಮತ್ತು ವೇತನ ಶ್ರೇಣಿ | ನೇರ ನೇಮಕಾತಿ ಮುಂಬಡ್ತಿ | ಒಟ್ಟು ಖಾಲಿ ಇರುವ ಹುದ್ದೆಗಳು | ನೇರ ನೇಮಕಾತಿ | ಮುಂಬಡ್ತಿ |
|---|---|---|---|---|---|
| 1. | ಅಡುಗೆಯವರು (10400-16400) | 50:50 | 3095 | 1547 | 1548 |
| 2. | ಅಡುಗೆ ಸಹಾಯಕರು (9600-14550) | 100/ಡಿಆರ್ | 2470 | 2470 | – |
| 3. | ರಾತ್ರಿ ಕಾವಲುಗಾರರು (9600-14550) | 100/ಡಿಆರ್ | 837 | 837 | -- |
| 4. | ಜವಾನರು (9600-14550) | 100/ಡಿಆರ್ | 25 | 25 | -- |
| | ಒಟ್ಟು | | 6427 | 4879 | 1548 |

ಸರ್ಕಾರದ ಆದೇಶ ಸಂಖ್ಯೆ:ಹಿಂವಕ 323 ಬಿಎಂಎಸ್ 2014, ದಿ:7.7.2015 ರಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ 100 ಸಂಖ್ಯಾಬಲದ 100 ಮೆಟ್ರಿಕ್ ನಂತರದ ಮಹಿಳಾ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲು ಮಂಜೂರಾತಿ ನೀಡಿ, ಪ್ರತಿ ವಿದ್ಯಾರ್ಥಿನಿಲಯಕ್ಕೆ ವಿವಿಧ ಹುದ್ದೆಗಳನ್ನು ಸಹಾ ಮಂಜೂರು ಮಾಡಿ ಆದೇಶಿಸಿರುತ್ತದೆ. ಈ ಹುದ್ದೆಗಳನ್ನೂ ಒಳಗೊಂಡಂತೆ ಭರ್ತಿ ಮಾಡಲು ಮೇಲ್ಕಂಡ ಪಟ್ಟಿಯಲ್ಲಿ ಸೇರ್ಪಡೆ ಮಾಡಿ, ಪ್ರಸ್ತಾವನೆ ಸಿದ್ಧಪಡಿಸಲಾಗಿದೆ.

ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸಂಬಂಧಿಸಿದ ಹುದ್ದೆಗಳ ವರ್ಗೀಕರಣದ ಶೆಡ್ಯೂಲ್ ಪ್ರಕಾರ ಜಿಲ್ಲಾ ಮತ್ತು ತಾಲ್ಲುಕು ಮಟ್ಟದ ಇಲಾಖಾ ಕಛೇರಿ/ಸಂಸ್ಥೆಗಳಲ್ಲಿನ ಅಡುಗೆಯವರು, ಜವಾನರು, ಅಡುಗೆ ಸಹಾಯಕರು, ರಾತ್ರಿ ಕಾವಲುಗಾರರ ಹುದ್ದೆಗಳಿಗೆ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಯಾದ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ನೇಮಕಾತಿ ಪ್ರಾಧಿಕಾರಿಗಳಾಗಿರುತ್ತಾರೆ.

ಅಲ್ಲದೆ ಈ ಹುದ್ದೆಗಳನ್ನು ಇಲಾಖಾ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸಂಬಂಧಪಟ್ಟಂತೆ ಸರ್ಕಾರದ ಆದೇಶ ಸಂಖ್ಯೆ:ಸಕಇ 498 ಪಕಸೆ 2001, ದಿ:29.12.2001 ರಲ್ಲಿ, ಜಿಲ್ಲಾ ಮಟ್ಟದ ನೇಮಕಾತಿ ಆಯ್ಕೆ ಸಮಿತಿಯನ್ನು ರಚಿಸಲಾಗಿರುತ್ತದೆ.

| | | |
|---|---|---|
| 1 | ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳು | ಅಧ್ಯಕ್ಷರು |
| 2 | ಆಯಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು | ಸದಸ್ಯರು |
| 3 | ಸಂಬಂಧಪಟ್ಟ ಇಲಾಖಾ ನಿರ್ದೇಶಕರ ಕಛೇರಿಯ ಅಧಿಕಾರಿ ಪ್ರತಿನಿಧಿ (ಉಪ ನಿರ್ದೇಶಕರ ಹುದ್ದೆಗಿಂತ ಕಡಿಮೆ ಇಲ್ಲದಂತೆ ಶ್ರೇಣಿಯ ಅಧಿಕಾರಿ) | ಸದಸ್ಯರು |
| 4 | ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ | ಸದಸ್ಯ ಕಾರ್ಯದರ್ಶಿ |

...4

ಮೇಲ್ಕಂಡ ಆಯ್ಕೆ ಸಮಿತಿ ಮೂಲಕ ಡಿ-ಗ್ರೂಪ್ ವೃಂದದ ಹುದ್ದೆಗಳನ್ನು ಭರ್ತಿ ಮಾಡಬಹುದಾಗಿದೆ. ಗ್ರೂಪ್-ಡಿ ವೃಂದದ 4879 ಖಾಲಿ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಆರ್ಥಿಕ ಇಲಾಖೆಯ ಸಹಮತಿ ಪಡೆದು ಅನುಮತಿ ನೀಡುವಂತೆ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಸರ್ಕಾರಕ್ಕೆ ಏಕ ಕಡತದ ಮೂಲಕ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯಲ್ಲಿನ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:ಹಿಂವಕ 336 ಬಿಇಟಿ 2015, ಬೆಂಗಳೂರು ದಿನಾಂಕ:05-11-2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಈ ಕೆಳಕಂಡ ಗ್ರೂಪ್-ಡಿ ಹುದ್ದೆಗಳನ್ನು ಜಿಲ್ಲಾ ಮಟ್ಟದ ನೇಮಕಾತಿ ಆಯ್ಕೆ ಸಮಿತಿಯ ಮುಖಾಂತರ ನಿಯಮಾನುಸಾರ ಭರ್ತಿ ಮಾಡಲು ಅನುಮೋದನೆ ನೀಡಿ ಆದೇಶಿಸಿದೆ.

| ಕ್ರ ಸಂ | ಹುದ್ದೆಯ ಪದನಾಮ | ಹುದ್ದೆಗಳ ಸಂಖ್ಯೆ | ನೇಮಕಾತಿ ವಿಧಾನ |
|---|---|---|---|
| 1 | ಅಡುಗೆಯವರು | 1547 | ನೇರ ನೇಮಕಾತಿ |
| 2 | ಅಡುಗೆ ಸಹಾಯಕರು | 2470 | ನೇರ ನೇಮಕಾತಿ |
| 3 | ಜವಾನರು | 25 | ಹೊರಗುತ್ತಿಗೆ |
| | **ಒಟ್ಟು** | **4042** | |

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 984 ವೆಚ್ಚ-3/2015, ದಿನಾಂಕ:31.10.2015 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್.ಆರ್.ಎರೆಕುಪ್ಪಿ)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಇವರಿಗೆ:

1) ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು
2) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ (ಆಯುಕ್ತರು, ಹಿಂ.ವ.ಕ ಇಲಾಖೆ ಇವರ ಮುಖಾಂತರ)
3) ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿಗಳು (ಆಯುಕ್ತರು, ಹಿಂ.ವ.ಕ ಇಲಾಖೆ ಇವರ ಮುಖಾಂತರ)
4) ಮಾನ್ಯ ಮುಖ್ಯಮಂತ್ರಿಗಳ ಆಪ್ತ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು
5) ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು,
6) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ರವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು
7) ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು